ಸಂ: ಬೆಂಅಪ್ರಾ/ಆ/ಸಿ.ವಿ./1332/2017-18

ಆಯುಕ್ತರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು. ದಿನಾಂಕ: 12-03-2018

# ಪ್ರಕಟಣೆ

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಬಾಕಿ ಇರುವ ಹಿಂಬಾಕಿ (BackLog) ಪ್ರ.ದ.ಸ., ಎ.ದ.ಸ., ಬೆರಳಚ್ಚುಗಾರ ಮತ್ತು ಶೀಘ್ರಲಿಪಿಗಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬುವ ಸಲುವಾಗಿ ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹುದ್ದೆಯ ವಿವರ ಈ ಕೆಳಕಂಡಂತೆ ಇರುತ್ತದೆ. ಈ ನೇಮಕಾತಿಗಳನ್ನು ಸರ್ಕಾರಿ ಅಧಿಸೂಚನೆ ಸಂಖ್ಯೆ: ಡಿ.ಪಿ.ಎ.ಆರ್./13/ಎಸ್.ಬಿ.ಸಿ./2001, ದಿನಾಂಕ:21.11.2001 ರಲ್ಲಿಯ ಮಾರ್ಗಸೂಚಿ ಅನುಸರಿಸಿ, ವಿಶೇಷ ನೇಮಕಾತಿ ನಿಯಮ-2001 ರ ಪ್ರಕಾರ ಭರ್ತಿ ಮಾಡಲಾಗುವುದು.

| ಕ್ರಸಂ. | ಹುದ್ದೆಯ ಹೆಸರು ಮತ್ತು ವೇತನ ಶ್ರೇಣಿ | ಒಟ್ಟು ಹುದ್ದೆಗಳು | ಪರಿಶಿಷ್ಟ ಜಾತಿ | ಪರಿಶಿಷ್ಟ ಪಂಗಡ |
|---|---|---|---|---|
| 1 | ಪ್ರ.ದ.ಸ., (ರೂ. 14,550/- ರಿಂದ 26,700/-) | 01 | 01 | - |
| 2 | ಎ.ದ.ಸ., (ರೂ. 11,600/- ರಿಂದ 21,000/-) | 01 | - | 01 |
| 3 | ಬೆರಳಚ್ಚುಗಾರರು, (ರೂ. 11,600/- ರಿಂದ 21,000/-) | 01 | - | 01 |
| 4 | ಶೀಘ್ರಲಿಪಿಗಾರರು, (ರೂ. 14,550/- ರಿಂದ 26,700/-) | 01 | - | 01 |

ವಿದ್ಯಾರ್ಹತೆ:

1. ಅ) **ಪ್ರಥಮ ದರ್ಜೆ ಸಹಾಯಕರು:** ಯು.ಜಿ.ಸಿ. ಯಿಂದ ಮಾನ್ಯತೆ ಪಡೆದ ಯಾವುದೇ ವಿಶ್ವವಿದ್ಯಾನಿಲಯದಿಂದ ಯಾವುದಾದರೊಂದು ವಿಷಯದಲ್ಲಿ ಬಿ.ಎ, ಬಿ.ಕಾಂ, ಬಿ.ಎಸ್ಸಿ, ಅಥವಾ ತತ್ಸಮಾನ ವಿಷಯದಲ್ಲಿ ಪದವಿ ಪಡೆದಿರಬೇಕು. 03 ವರ್ಷಗಳ ಅಂಕಪಟ್ಟಿಯ ಪ್ರಮಾಣ ಪತ್ರ ಹಾಗೂ ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸಬೇಕು.
   ಆ) ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡವನ್ನು ಪ್ರಥಮ ಭಾಷೆಯನ್ನಾಗಿ ತೆಗೆದುಕೊಂಡಿರತಕ್ಕದ್ದು.
   ಇ) ಡಾಟಾ ಎಂಟ್ರಿ ಆಪರೇಟರ್ ಕೋರ್ಸ್ ತೇರ್ಗಡೆ ಹೊಂದಿರುವ ಬಗ್ಗೆ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ಸರ್ಟಿಫಿಕೇಟ್ ಪಡೆದಿರಬೇಕು.
2. ಅ) **ಎರಡನೇ ದರ್ಜೆ ಸಹಾಯಕರು:** ಪಿ.ಯು.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
   ಆ) ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡವನ್ನು ಪ್ರಥಮ ಭಾಷೆಯನ್ನಾಗಿ ತೆಗೆದುಕೊಂಡಿರತಕ್ಕದ್ದು.
   ಇ) ಡಾಟಾ ಎಂಟ್ರಿ ಆಪರೇಟರ್ ಕೋರ್ಸ್ ತೇರ್ಗಡೆ ಹೊಂದಿರುವ ಬಗ್ಗೆ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ಸರ್ಟಿಫಿಕೇಟ್ ಪಡೆದಿರಬೇಕು.
3. ಅ) **ಬೆರಳಚ್ಚುಗಾರರು:** ಪಿ.ಯು.ಸಿ. ಪರೀಕ್ಷೆಯಲ್ಲಿ ಪಾಸಾಗಿರತಕ್ಕದ್ದು.
   ಆ) ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡವನ್ನು ಪ್ರಥಮ ಭಾಷೆಯನ್ನಾಗಿ ತೆಗೆದುಕೊಂಡಿರತಕ್ಕದ್ದು.
   ಇ) ಅಭ್ಯರ್ಥಿಯು ಕನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸಲ್ಪಟ್ಟಿರುವ ಸೀನಿಯರ್ ಗ್ರೇಡ್ ಟೈಪ್ ರೈಟಿಂಗ್ ಪರೀಕ್ಷೆಯನ್ನು ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳಲ್ಲಿ ಉತ್ತೀರ್ಣರಾಗಿರಬೇಕು.
   ಈ) ಡಾಟಾ ಎಂಟ್ರಿ ಆಪರೇಟರ್ ಕೋರ್ಸ್ ತೇರ್ಗಡೆ ಹೊಂದಿರುವ ಬಗ್ಗೆ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ಸರ್ಟಿಫಿಕೇಟ್ ಪಡೆದಿರಬೇಕು.
4. ಅ) **ಶೀಘ್ರಲಿಪಿಗಾರರು:** ಪಿ.ಯು.ಸಿ. ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರತಕ್ಕದ್ದು.
   ಆ) ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡವನ್ನು ಪ್ರಥಮ ಭಾಷೆಯನ್ನಾಗಿ ತೆಗೆದುಕೊಂಡಿರತಕ್ಕದ್ದು.

ಇ) ಅಭ್ಯರ್ಥಿಯು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸಲ್ಪಡುವ ಸೀನಿಯರ್ ಟೈಪ್ ರೈಟಿಂಗ್ ಪರೀಕ್ಷೆಯನ್ನು ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳಲ್ಲಿ (Senior Grade Typewriting in Kannada and English) ಉತ್ತೀರ್ಣತೆ ಹೊಂದಿರಬೇಕು.

ಈ) ಅಭ್ಯರ್ಥಿಯು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸಲಾಗುವ ಸೀನಿಯರ್ ಗ್ರೇಡ್ ಶೀಘ್ರಲಿಪಿಗಾರ ಪರೀಕ್ಷೆಯಲ್ಲಿ (Senior Grade Shorthand in Kannada and English ) ಉತ್ತೀರ್ಣತೆ ಹೊಂದಿರಬೇಕು.

ಉ) ಡಾಟಾ ಎಂಟ್ರಿ ಆಪರೇಟರ್ ಕೋರ್ಸ್ ತೇರ್ಗಡೆ ಹೊಂದಿರುವ ಬಗ್ಗೆ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ಸರ್ಟಿಫಿಕೇಟ್ ಪಡೆದಿರಬೇಕು.

**ಸೂಚನೆಗಳು:-**

1. ಅಭ್ಯರ್ಥಿಯು ಅರ್ಜಿಯನ್ನು ಸಲ್ಲಿಸುವ ದಿನಾಂಕದಂದು 18 ವರ್ಷ ತುಂಬಿರಬೇಕು ಹಾಗೂ 40 ವರ್ಷ ಮೀರಿರಬಾರದು.
2. ಅರ್ಜಿಯ ಜೊತೆಗೆ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಗೆಜೆಟೆಡ್ ಅಧಿಕಾರಿಯಿಂದ ದೃಢೀಕರಿಸಿ ಲಗತ್ತಿಸತಕ್ಕದ್ದು.
3. ಗೆಜೆಟೆಡ್ ಅಧಿಕಾರಿಯಿಂದ ದೃಢೀಕರಿಸಲ್ಪಟ್ಟ ಅಂಕಪಟ್ಟಿ ಮತ್ತು ಜನನ ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು.
4. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರ್ ಕಛೇರಿಯಿಂದ ಪಡೆದು ಸಲ್ಲಿಸತಕ್ಕದ್ದು.
5. ಮೆರಿಟ್ ಲಿಸ್ಟ್ ಅನ್ನು ಶೈಕ್ಷಣಿಕ ಅರ್ಹತೆ ಹಾಗೂ ಅವರು ತೆಗೆದುಕೊಂಡ ಅಂಕಗಳನ್ನು ಮಾತ್ರ ಆಧರಿಸಿರುತ್ತದೆ. ಸಂದರ್ಶನ ಪರೀಕ್ಷೆ ಇರುವುದಿಲ್ಲ.
6. ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ:19-03-2018.
7. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:31-03-2018 ರಂದು ಸಂಜೆ 5.30 ಆಗಿರುತ್ತದೆ. ಅರ್ಜಿಯನ್ನು ಕಡ್ಡಾಯವಾಗಿ ಆನ್‌ಲೈನ್ ಮೂಲಕ (ಜಾಲತಾಣದ ವಿಳಾಸ: www.bdabangalore.org), ಸಲ್ಲಿಸ ತಕ್ಕದ್ದು.
8. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ ಜಾಲತಾಣದಲ್ಲಿರುವ ಸೂಚನೆಗಳನ್ನು ಪಾಲಿಸಿ ಅರ್ಜಿಗಳನ್ನು ಸಲ್ಲಿಸ ತಕ್ಕದ್ದು.
9. ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
10. ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸುವ ಅಥವಾ ರದ್ದುಪಡಿಸುವ ಅಧಿಕಾರ ನೇಮಕಾತಿ ಪ್ರಾಧಿಕಾರಕ್ಕೆ ಕಾಯ್ದಿರಿಸಲಾಗಿದೆ.

12/03

ಆಯುಕ್ತರು
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.